# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಜಿ.ಎಂ.ಶಬೀರ್ ಅಹಮ್ಮದ್, ಮುಖ್ಯ ಯೋಜನಾಧಿಕಾರಿ(ಪ್ರಸ್ತುತ ನಿವೃತ್ತ) ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿರುವ ಕರ್ತವ್ಯ ಲೋಪಕ್ಕೆ ಸಂಬಂಧಿಸಿದಂತೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಗಳ ಬದಲಾವಣೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/221/ವಿಸೇಚಿ/2015, ದಿ:15-06-2017.

2. ಶ್ರೀ ಹೆಚ್.ಎಸ್.ರಾಮಕೃಷ್ಣ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಮತ್ತು ವಿಚಾರಣಾಧಿಕಾರಿಗಳು ಇವರ ಪತ್ರ ದಿ:15-07-2017.

-000-

ಪ್ರಸ್ತಾವನೆ:

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಮುಖ್ಯ ಯೋಜನಾಧಿಕಾರಿ (ಪ್ರಸ್ತುತ ನಿವೃತ್ತ) ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ 2011-12ನೇ ಸಾಲಿನಲ್ಲಿ 13ನೇ ಹಣಕಾಸು ಯೋಜನೆಯಡಿ ಬಿಡುಗಡೆಯಾಗಿರುವ ಅನುದಾನದಲ್ಲಿ ಸೋಲಾರ್ ದೀಪಗಳನ್ನು ಖರೀದಿಸಿ ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ 21/ಗ್ರಾಪಸ/2013, ಬೆಂಗಳೂರು, ದಿನಾಂಕ:20-02-2013ರ ಮಾರ್ಗ ಸೂಚಿಗಳನ್ನು ಉಲ್ಲಂಘಿಸಿ ಕರ್ತವ್ಯ ಲೋಪವನ್ನು ಎಸಗಿರುವ ಹಾಗೂ ಇತರೆ ಆರೋಪಗಳಿಗೆ ಸಂಬಂಧಿಸಿದಂತೆ ಕರ್ತವ್ಯ ನಿರ್ಲಕ್ಷತೆ ತೋರಿರುವ ಶ್ರೀ ಜಿ.ಎಂ.ಶಬೀರ್ ಅಹಮ್ಮದ್, ಮುಖ್ಯ ಯೋಜನಾಧಿಕಾರಿ(ಪ್ರಸ್ತುತ ನಿವೃತ್ತ) ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ರವರ ವಿರುದ್ಧದ ಇಲಾಖಾ ವಿಚಾರಣೆ ಜರುಗಿಸಲು, ಸರ್ಕಾರವು ಶ್ರೀ ಹೆಚ್.ಎಸ್.ರಾಮಕೃಷ್ಣ, ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಶ್ರೀ ಹೆಚ್.ಎಸ್.ರಾಮಕೃಷ್ಣ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು ಇವರ ಪತ್ರದಲ್ಲಿ ಕೇಂದ್ರ ಕಛೇರಿಯಾದ ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗರವರಿಂದ ಅನುಮತಿಯನ್ನು ನೀಡಿಲ್ಲವಾದ್ದರಿಂದ ವಿಚಾರಣೆಗೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳನ್ನು ಸರ್ಕಾರಕ್ಕೆ ಕಳುಹಿಸಿರುವ ಹಿನ್ನೆಲೆಯಲ್ಲಿ ಶ್ರೀ ಬಿ.ಎಂ.ಅಂಗಡಿ, ನಿವೃತ್ತ ಪ್ರಧಾನ ಜಿಲ್ಲಾ ಸತ್ರ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಗಳಾಗಿ ನೇಮಿಸಲು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 221 ವಿಸೇಚಿ 2015,ಬೆಂಗಳೂರು,ದಿನಾಂಕ:07-08-2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಮುಖ್ಯ ಯೋಜನಾಧಿಕಾರಿ (ಪ್ರಸ್ತುತ ನಿವೃತ್ತ)ಜಿಲ್ಲಾ ಪಂಚಾಯತಿ,ಚಿಕ್ಕಬಳ್ಳಾಪುರ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ 2011-12ನೇ

ಸಾಲಿನಲ್ಲಿ 13ನೇ ಹಣಕಾಸು ಯೋಜನೆಯಡಿ ಬಿಡುಗಡೆಯಾಗಿರುವ ಅನುದಾನದಲ್ಲಿ ಸೋಲಾರ್ ದೀಪಗಳನ್ನು ಖರೀದಿಸಿ ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ 21/ಗ್ರಾಪಸ/2013, ಬೆಂಗಳೂರು, ದಿನಾಂಕ:20-02-2013ರ ಮಾರ್ಗ ಸೂಚಿಗಳನ್ನು ಉಲ್ಲಂಘಿಸಿ ಕರ್ತವ್ಯ ಲೋಪವನ್ನು ಎಸಗಿರುವ ಹಾಗೂ ಇತರೆ ಆರೋಪಗಳಿಗೆ ಸಂಬಂಧಿಸಿದಂತೆ ಕರ್ತವ್ಯ ನಿರ್ಲಕ್ಷತೆ ತೋರಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣದಲ್ಲಿ, ವಿಚಾರಣಾಧಿಕಾರಿಗಳನ್ನು ಹಿಂದೆ ನೇಮಿಸಿದ ಶ್ರೀ ಹೆಚ್.ಎಸ್.ರಾಮಕೃಷ್ಣ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು ಇವರ ಬದಲಾಗಿ ಶ್ರೀ ಬಿ.ಎಂ.ಅಂಗಡಿ, ನಿವೃತ್ತ ಪ್ರಧಾನ ಜಿಲ್ಲಾ ಸತ್ರ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯಾಗಿ ತಕ್ಷಣದಿಂದ ಜಾರಿಗೆ ಬರುವಂತೆ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಿ.ಎಸ್. ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಬಿ&ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1) ಪ್ರಧಾನ ಮಹಾಲೇಖಪಾಲರು (ಎ&ಇ)ರವರ ಕಾರ್ಯದರ್ಶಿ, ಕರ್ನಾಟಕ ಹೊಸಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ-5329, ಬೆಂಗಳೂರು-560001.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು/ ಚಿಕ್ಕಬಳ್ಳಾಪುರ
3) ಶ್ರೀ ಬಿ.ಎಂ.ಅಂಗಡಿ, ನಿವೃತ್ತ ಪ್ರಧಾನ ಜಿಲ್ಲಾ ಸತ್ರ ನ್ಯಾಯಾಧೀಶರು, ನಂ.2107, ಸಾಯಿಕಿರಣ್, 8ನೇ ಮೇನ್, 2ನೇ ಕ್ರಾಸ್, ಜುಡಿಷಿಯಲ್ ಲೇಔಟ್, ಅಲ್ಲಾಳಸಂದ್ರ, ಯಲಹಂಕ, ಬೆಂಗಳೂರು
4) ಶ್ರೀ ಹೆಚ್.ಎಸ್.ರಾಮಕೃಷ್ಣ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಮತ್ತು ವಿಚಾರಣಾಧಿಕಾರಿಗಳು, ನಂ.245, 8ನೇ ಮೇನ್, ಜುಡಿಷಿಯಲ್ ಲೇಔಟ್, ಶಿವನಗರ, ತಲಘಟ್ಟಪುರ ಬೆಂಗಳೂರು-560062
5) ಉಪ ಕಾರ್ಯದರ್ಶಿ(ಆಡಳಿತ) ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ(ಮಂಡನಾಧಿಕಾರಿ).
6) ಆಪಾದಿತ ಅಧಿಕಾರಿಗೆ(ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿ.ಪಂ.ಚಿಕ್ಕಬಳ್ಳಾಪುರ ಇವರ ಮುಖಾಂತರ)

<u>ಪ್ರತಿಯನ್ನು:-</u>

1) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.